ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಎಸಿಬಿ

ಪತ್ರಿಕೆಯ ಹೆಸರು : NAME OF THE NEWS PAPER : ಉದಯಕಾಲ ದಿನಾಂಕ : DATE : 6/11/2019

# ಸಿಎಂ ಯಡಿಯೂರಪ್ಪ ವಿರುದ್ಧ ಎಸಿಬಿಗೆ ದೂರು

ಉ.ಕಾ. 6/11/19

ಬೆಂಗಳೂರು: ರಾಜ್ಯದ 17 ಮಂದಿ ಶಾಸಕರಿಗೆ ಹಣ ಮತ್ತು ಅಧಿಕಾರದ ಆಮಿಷವೊಡ್ಡಿ ಮುಂಬೈನ ಹೋಟೆಲ್‌ವೊಂದರಲ್ಲಿ ಇಟ್ಟು ಅವರಿಗೆ ರಕ್ಷಣೆ ನೀಡುವ ಮೂಲಕ ಪ್ರಜಾಪ್ರಭುತ್ವ ವ್ಯವಸ್ಥೆಗೆ ಅಪಚಾರ ಮಾಡಿರುವ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ವಿರುದ್ಧ ಕಾನೂನು ಕ್ರಮಕೈಗೊಳ್ಳುವಂತೆ ಮಾಹಿತಿ ಮತ್ತು ಮಾನವ ಹಕ್ಕು ಹಾಗೂ ಸಾಮಾಜಿಕ ಕಾರ್ಯಕರ್ತ ಎನ್.ಹನುಮೇಗೌಡ ಮಂಗಳವಾರ ಭ್ರಷ್ಟಾಚಾರ ನಿಗ್ರಹ ದಳ(ಎಸಿಬಿ)ಕ್ಕೆ ದೂರು ನೀಡಿದ್ದಾರೆ. ಇತ್ತೀಚೆಗೆ ಹುಬ್ಬಳ್ಳಿಯಲ್ಲಿ ನಡೆದ ಬಿಜೆಪಿ ಸಭೆಯಲ್ಲಿ ಸಿಎಂ ಯಡಿಯೂರಪ್ಪ ಅವರು ಮಾತನಾಡಿದ್ದಾರೆ ಎನ್ನಲಾದ ವಿಡಿಯೋವಲ್ಲಿ 17 ಮಂದಿ ಶಾಸಕರ ರಾಜೀನಾಮೆಯಿಂದ ಬಿಜೆಪಿ ಸರ್ಕಾರ ಅಧಿಕಾರ ಬಂದಿದ ಎಂದಿದ್ದಾರೆ. ಈ ವಿಡಿಯೋ ಎಲ್ಲೆಡೆ ವೈರಲ್ ಆಗಿದೆ. ಈ ಮೂಲಕ ಶಾಸಕರಿಗೆ ಹಣ ಮತ್ತು ಅಧಿಕಾರ ಆಮಿಷವೊಡ್ಡಿದ್ದಾರೆ ಎಂಬುದು ತಿಳಿದು ಬಂದಿದೆ. ಅದು ಭ್ರಷ್ಟಾಚಾರಕ್ಕೆ ಸಮವಾಗಿರುವುದರಿಂದ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ಕಾನೂನು ಕ್ರಮಕೈಗೊಳ್ಳುವಂತೆ ಹನುಮೇಗೌಡ ಎಸಿಬಿಗೆ ನೀಡಿರುವ ದೂರಿನಲ್ಲಿ ಕೋರಿದ್ದಾರೆ.